# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ಸಂಧ್ಯಾ ಸುರಕ್ಷಾ ವೇತನ ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯಡಿ 65 ರಿಂದ 80 ವರ್ಷದೊಳಗಿನ ಫಲಾನುಭವಿಗಳ ಪಿಂಚಣಿ ಮೊತ್ತವನ್ನು ಹೆಚ್ಚಿಸುವ ಬಗ್ಗೆ.

**ಉಲ್ಲೇಖ:** 2012-13 ನೇ ಸಾಲಿನ ಅಯವ್ಯಯ ಭಾಷಣ.

**ಪ್ರಸ್ತಾವನೆ:**

ರಾಜ್ಯ ಸರ್ಕಾರವು 2012-13 ನೇ ಸಾಲಿನ ಅಯವ್ಯಯದಲ್ಲಿ ಸಾಮಾಜಿಕ ಭದ್ರತಾ ವೇತನಗಳಡಿ 65 ರಿಂದ 80ರ ವರ್ಷದೊಳಗಿನ ಅರ್ಹ ಫಲಾನುಭವಿಗಳಿಗೆ ನೀಡಲಾಗುವ ಸಾಮಾಜಿಕ ಭದ್ರತಾ ವೇತನವನ್ನು ಏಪ್ರಿಲ್ 2012 ರಿಂದ ರೂ.400 (ರೂ. ನಾಲ್ಕು ನೂರು ಮಾತ್ರ) ರಿಂದ ರೂ.500 (ರೂ. ಐದು ನೂರು ಮಾತ್ರ) ಗಳಿಗೆ ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುತ್ತಾರೆ. ಆದುದರಿಂದ, ನಿರ್ಗತಿಕ ವಿಧವಾ ವೇತನ ಹಾಗೂ ರೂ.400 ಗಳ ಅಂಗವಿಕಲ ವೇತನ ಪಡೆಯುತ್ತಿರುವ 65 ವರ್ಷಕ್ಕೂ ಹೆಚ್ಚು ವಯಸ್ಸಾದ ಫಲಾನುಭವಿಗಳನ್ನು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯಡಿ ವರ್ಗಾಯಿಸಲು ಮತ್ತು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಹಾಗೂ ಸಂಧ್ಯಾಸುರಕ್ಷಾ ವೇತನ ಯೋಜನೆಗಳಡಿ 65 ರಿಂದ 80 ವರ್ಷದೊಳಗಿನ ಫಲಾನುಭವಿಗಳಿಗೆ ರೂ.500 ಗಳ (ರೂ.ಐದು ನೂರು ಮಾತ್ರ) ಮಾಸಾಶನವನ್ನು ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದ ಹಿನ್ನಲೆಯಲ್ಲಿ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ, ಕಂಇ 39 ಡಿಎಸ್‌ಪಿ 2012, ದಿನಾಂಕ:09.04.2012**

ನಿರ್ಗತಿಕ ವಿಧವಾ ವೇತನ ಹಾಗೂ ಅಂಗವಿಕಲ ವೇತನ (ಶೇ 40ಕ್ಕಿಂತ ಹೆಚ್ಚು ಹಾಗೂ ಶೇ.75ಕ್ಕಿಂತ ಕಡಿಮೆ ಅಂಗವೈಕಲತೆ) ದಡಿ 65 ಕ್ಕಿಂತ ಹೆಚ್ಚು ವಯಸ್ಸಾದ ಫಲಾನುಭವಿಗಳನ್ನು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯಡಿ ವರ್ಗಾಯಿಸಲು ಮತ್ತು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಹಾಗೂ ಸಂಧ್ಯಾ ಸುರಕ್ಷಾ ಯೋಜನೆಗಳಡಿ 65 ರಿಂದ 80 ವರ್ಷದೊಳಗಿನ ಫಲಾನುಭವಿಗಳಿಗೆ ರೂ.500 ಗಳ (ರೂ.ಐದು ನೂರು ಗಳು ಮಾತ್ರ) ಮಾಸಾಶನವನ್ನು ದಿನಾಂಕ:01.04.2012 ರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ.

**ಫಲಾನುಭವಿಗಳನ್ನು ಗುರುತಿಸುವ ಇನ್ನುಳಿದ ಅರ್ಹತೆಯ ಮಾನದಂಡಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.**

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಅಶೋಕ್ ಕುಮಾರ್ ಸಿ. ಮನೋಳಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ.

**ಇವರಿಗೆ:** ಸಂಕಲನಾಕಾರರು ಕರ್ನಾಟಕ ರಾಜ್ಯ ಪತ್ರ, ಇವರಿಗೆ ರಾಜ್ಯದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸುವಂತೆ ಕೋರಿದೆ.

**ಪ್ರತಿಯನ್ನು:**

1.ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2.ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3.ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ.
4.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5.ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.
6.ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
7.ಎಲ್ಲಾ ಜಿಲ್ಲಾಧಿಕಾರಿಗಳು.
8.ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
9.ಎಲ್ಲಾ ಉಪ ವಿಭಾಗಾಧಿಕಾರಿಗಳು/ಎಲ್ಲಾ ತಹಸೀಲ್ದಾರರುಗಳಿಗೆ.
10.ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
11.ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.
12.ಹೆಚ್ಚುವರಿ ಪ್ರತಿ ಮತ್ತು ಶಾಖಾ ರಕ್ಷಾ ಕಡತ.